**ಶ್ರೀ ಶರಣಪ್ಪ ವಿ. ಬಂಡಿಹಾಳ, ಇವರು ಕಲ್ಲೂರು-ಗ್ರಾಮ, ಯಲಬುರ್ಗಾ-ತಾಲ್ಲೂಕು, ಕೊಪ್ಪಳ-ಜಿಲ್ಲೆಯಲ್ಲಿ ಇರುವ ಸರ್ವೆ ನಂಬರ್: 291/1 (291/2) ರ ಪಟ್ಟಾ ಭೂಮಿ (3.75 ಎಕರೆ) ಪ್ರದೇಶವನ್ನು "ಬೂದು ಬೆಣಚುಕಲ್ಲು (ಗ್ರ್ಯಾನೈಟ್) ಗಣಿಗಾರಿಕೆಯನ್ನು" ಅಭಿವೃದ್ಧಿ ಪಡಿಸಲು ಉದ್ದೇಶಿಸಿರುತ್ತಾರೆ. ಇದರ ಪ್ರಯುಕ್ತ ಉದ್ದೇಶಿತ ಯೋಜನೆಯ ಸ್ಥಾಪನೆಯ ಹಿನ್ನೆಲೆಯಲ್ಲಿ ನಡೆದ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ನಡುವಳಿಗಳು.**

ದಿನಾಂಕ : 19-03-2021.

ವೇಳೆ : ಬೆಳಿಗ್ಗೆ 11:00 ಘಂಟೆ,

ಸ್ಥಳ : ಉದ್ದೇಶಿತ ಯೋಜನೆಯ ಪ್ರದೇಶ, ಶ್ರೀ ಶರಣಪ್ಪ ವಿ. ಬಂಡಿಹಾಳ, ಸರ್ವೆ ನಂಬರ್: 291/1, ಕಲ್ಲೂರು-ಗ್ರಾಮ ತಾಲ್ಲೂಕು-ಯಲಬುರ್ಗಾ, ಜಿಲ್ಲೆ-ಕೊಪ್ಪಳ.

ಶ್ರೀ ಶರಣಪ್ಪ ವಿ. ಬಂಡಿಹಾಳ, ಸರ್ವೆ ನಂಬರ್: 291/1 (291/2), ಇವರು ಕಲ್ಲೂರು-ಗ್ರಾಮ, ಯಲಬುರ್ಗಾ- ತಾಲೂಕು, ಕೊಪ್ಪಳ-ಜಿಲ್ಲೆಯಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಿರುತ್ತಾರೆ. ಈ ಬಗ್ಗೆ ದಿನಾಂಕ: 19-03-2021 ರಂದು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ, ಇವರ ಅಧ್ಯಕ್ಷತೆಯಲ್ಲಿ ಯೋಜನೆಯ ಸ್ಥಳದಲ್ಲಿ ನಡೆಸಿದ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ನಡುವಳಿಗಳು.

| | | |
|---|---|---|
| ಪರಿಸರ ಸಾರ್ವಜನಿಕ ಸಭೆ ನಡೆದ ಸ್ಥಳ | : | ಉದ್ದೇಶಿತ ಯೋಜನೆಯ ಪ್ರದೇಶ, ಶ್ರೀ ಶರಣಪ್ಪ ವಿ. ಬಂಡಿಹಾಳ, ಸರ್ವೆ ನಂಬರ್: 291/1 (291/2), ಕಲ್ಲೂರು-ಗ್ರಾಮ, ತಾಲ್ಲೂಕು-ಯಲಬುರ್ಗಾ, ಜಿಲ್ಲೆ-ಕೊಪ್ಪಳ. |
| ಹಾಜರಿದ್ದ ಅಧಿಕಾರಿಗಳ ವಿವರ | : | ಅನುಬಂಧ-1 |
| ಯೋಜನೆಯ ಪರವಾಗಿ ಹಾಜರಿದ್ದ ಪ್ರತಿನಿಧಿಗಳ ವಿವರ | : | ಅನುಬಂಧ-2 |
| ಭಾಗವಹಿಸಿದಂತಹ ಸಾರ್ವಜನಿಕರ ವಿವರ | : | ಅನುಬಂಧ-3 |
| ಪರಿಸರ ಸಾರ್ವಜನಿಕ ಸಭೆಯ ಬಗ್ಗೆ ನೀಡಿದ ಪತ್ರಿಕಾ ಪ್ರಕಟಣೆಯ ವಿವರಗಳು | : | ಅನುಬಂಧ-4 |
| ಶಕ್ತಿ ಬಿಂದು ಪ್ರದರ್ಶನದ ವಿವರಗಳು | : | ಅನುಬಂಧ-5 |
| ಪರಿಸರ ಸಾರ್ವಜನಿಕ ಆಲಿಕೆ ಸಭೆ ಪ್ರಕ್ರಿಯೆಯ ಛಾಯಾ ಚಿತ್ರಗಳು | : | ಅನುಬಂಧ-6 |
| ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ.ಗಳು. | : | ಅನುಬಂಧ-7 |
| ಸಾರ್ವಜನಿಕರು/ಪರಿಸರಾಸಕ್ತ ಸಂಪನ್ಮೂಲ ವ್ಯಕ್ತಿಗಳು ಸಲ್ಲಿಸಿದಹವಾಲುಗಳು | : | ಅನುಬಂಧ-8 |

ಕೇಂದ್ರ ಅರಣ್ಯ, ಪರಿಸರ ಹಾಗೂ ಆಘಾತ ಅಧ್ಯಯನ ಅಧಿಸೂಚನ, ಇವರು ದಿನಾಂಕ 14-09-2006 (ತಿದ್ದುಪಡಿ ದಿನಾಂಕ: 01-12-2009) ರಂದು ಹೊರಡಿಸಿರುವ ಅಧಿಸೂಚನೆ ಪ್ರಕಾರ ಸದರಿ ಯೋಜನೆಯು ಪರಿಸರ ವಿಮೋಚನಾ ಪತ್ರವನ್ನು ಪಡೆಯಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಪರಿಸರ ಕುರಿತು ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವುದು ಕಡ್ಡಾಯವಾಗಿರುತ್ತದೆ ಹಾಗೂ ಸಭೆಯನ್ನು ಆಯೋಜಿಸುವ ಜವಾಬ್ದಾರಿಯು ಮಂಡಳಿಯದ್ದಾಗಿರುತ್ತದೆ.

ಗಣಿ ಮತ್ತು ಭೂ–ವಿಜ್ಞಾನ ಇಲಾಖೆ ಪತ್ರದ ಸಂಖ್ಯೆ:ಡಿಎಂಜಿ/ಎಸ್‌ಜಿ/ಕೆಪಿಎಲ್/ಕ್ಯೂಪಿಎ/2016-17/(1780)1782 ದಿನಾಂಕ:03.03.2017/03.04.2017 ರಂದು **"ಬೂದು ಬೆಣಚುಕಲ್ಲು (ಗ್ರ್ಯಾನೈಟ್) ಗಣಿಗಾರಿಕೆ"** ಕ್ವಾರಿ ಯೋಜನೆಯನ್ನು ಅನುಮೋಧಿಸಿ, ಮೊದಲನೇ ವರ್ಷಕ್ಕೆ 5,237 ಕ್ಯೂಮೀ., ಎರಡನೇ ವರ್ಷಕ್ಕೆ 6,567 ಕ್ಯೂಮೀ., ಮೂರನೇ ವರ್ಷಕ್ಕೆ 5,362, ನಾಲ್ಕನೇ ವರ್ಷಕ್ಕೆ 5,740 ಕ್ಯೂಮೀ., ಮತ್ತು ಐದನೇ ವರ್ಷಕ್ಕೆ 5,852 ಕ್ಯೂಮೀ., ಒಟ್ಟು ಐದು ವರ್ಷದಲ್ಲಿ 28,758 ಕ್ಯೂಮೀ., ಸಾಮರ್ಥ್ಯದ ಗಣಿಗಾರಿಕೆಯ ಉತ್ಪಾದನೆಯ ಯೋಜನೆಯನ್ನು ಹೊಂದಿದೆ. (ಕ್ವಾರಿ ಯೋಜನೆಯ ಅವಧಿ 5 ವರ್ಷ). ಕ್ವಾರಿ ಯೋಜನೆಯನ್ನು ಅನುಮೋದಿಸಿ ಗುತ್ತಿಗೆ ಗರಿಷ್ಟ 6,567 ಕ್ಯೂಮೀ., ಸಾಮರ್ಥ್ಯದ ಗಣಿಗಾರಿಕೆಯ ಉತ್ಪಾದನೆಯ ಯೋಜನೆಯನ್ನು ಹೊಂದಿದೆ.

ಕೇಂದ್ರ ಅರಣ್ಯ ಮತ್ತು ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯ, ಭಾರತ ಸರಕಾರ (ಆಘಾತ ಅಧ್ಯಯನ ವಿಭಾಗ) ನವದೆಹಲಿ, ಇವರ ಇ.ಐ.ಎ ಅಧಿಸೂಚನೆ ದಿನಾಂಕ: 14-09-2006 ರ ಪ್ರಕಾರ ಈ ಗಣಿಗಾರಿಕೆ ಯೋಜನೆಯು ಬಿ–1 ವರ್ಗವೆಂದು ಪರಿಗಣಿಸಲಾಗಿದೆ. ಯೋಜನೆ ಚಟುವಟಿಕೆ 1 (ಎ) ಇ.ಐ.ಎ ಅಧಿಸೂಚನೆ ಪರಿಸರ ಮಟ್ಟದ ಪ್ರಭಾವದ ಮೌಲ್ಯಮಾಪನ (ಇ.ಓ.ಎ) ಮತ್ತು ಪರಿಸರ ನಿರ್ವಹಣಾ ಯೋಜನೆ (ಇ.ಎಂ.ಪಿ) ನಿಯಮಗಳ ಉಲ್ಲೇಖದ (ಟಿ.ಓ.ಆರ್) ಆದಾರದ ಮೇಲೆ ಸದರಿ ಯೋಜನೆಯ **Standards Terms of Reference** ಅನ್ನು ದಿನಾಂಕ: **29.01.2019** ರಂದು ಅಂತಿಮಗೊಳಿಸಿ ಅದರಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಸಾರ್ವಜನಿಕ ಪರಿಸರ ಆಲಿಕೆ ಸಭೆಯನ್ನು ನಡೆಸಲು ಕೋರುವಂತೆ ಶ್ರೀ ಶರಣಪ್ಪ ವಿ. ಬಂಡಿಹಾಳ ಇವರು ತಿಳಿಸಿರುತ್ತಾರೆ.

ಯೋಜನಾ ಪ್ರವರ್ತಕರ ಮನವಿಯ ಮೇರೆಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಜಿಲ್ಲಾಧಿಕಾರಿಗಳು, ಕೊಪ್ಪಳ ಇವರಿಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸೂಕ್ತ ದಿನಾಂಕ ಮತ್ತು ಸಮಯವನ್ನು ನೀಡಲು ದಿನಾಂಕ:–02-01-2021 ರಂದು ಪತ್ರದ ಮೂಲಕ ಕೋರಲಾಗಿರುತ್ತದೆ. ಅದರಂತೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ದಿನಾಂಕ: 19.03.2021 ರಂದು ಸೂಚಿಸಿ ಸಭೆಯನ್ನು ನಡೆಸಲು ತಿಳಿಸಿರುತ್ತಾರೆ. ಆದ್ದರಿಂದ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ ಇವರ ಅಧ್ಯಕ್ಷತೆಯಲ್ಲಿ ನಡೆಸಲಾಗಿರುತ್ತದೆ.

ಇದರ ಅನ್ವಯ ಸದರಿ ವಿಸ್ತರಣಾ ಯೋಜನೆಯ ಕಾರ್ಯನಿರ್ವಹಣಾ ಸಾರಾಂಶ ವರದಿಯನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ತಯಾರಿಸಿ ಮತ್ತು ಪರಿಸರ ಆಘಾತ ಅಧ್ಯಯನ ವರದಿಯೊಂದಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಸಲ್ಲಿಸಿರುತ್ತಾರೆ. ಸದರಿ ಅಧಿಸೂಚನೆಯ ಪ್ರಕಾರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು 30 ದಿನಗಳ ಮುಂಚೆ, ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವ ಬಗ್ಗೆ ವಿವರವನ್ನು ಸಾರ್ವಜನಿಕರಿಗೆ ತಿಳಿಸುವ ಸಂಬಂಧ ಪತ್ರಿಕಾ ಪ್ರಕಟಣೆಯನ್ನು ರಾಜ್ಯ ಮಟ್ಟದ ಪತ್ರಿಕೆಗಳಾದ "ವಿಜಯ ಕರ್ನಾಟಕ" (ಕನ್ನಡ) ,"ಡೆಕ್ಕನ್ ಹೆರಾಲ್ಡ್" (ಆಂಗ್ಲ ಭಾಷೆ) ಯಲ್ಲಿ ದಿನಾಂಕ: 16.02.2021 ರಂದು ಹಾಗೂ ಸ್ಥಳೀಯ ಮಟ್ಟದಲ್ಲಿ "ನಾಗರೀಕ" ದಿನ ಪತ್ರಿಕೆಯಲ್ಲಿ ದಿನಾಂಕ: 18.02.2021 ರಂದು ಪತ್ರಿಕಾ ಪ್ರಕಟಣೆಯನ್ನು ನೀಡಲಾಗಿತ್ತು. ಯೋಜನೆಯ ಸುತ್ತಮುತ್ತಲೂ ವಾಸವಾಗಿರುವ ಆಸಕ್ತ ನಿವಾಸಿಗಳು, ಪರಿಸರ ಆಸಕ್ತ ಗುಂಪುಗಳು ಮತ್ತು ಈ ಯೋಜನೆಯಿಂದ ತೊಂದರೆಗೊಳಗಾಗುವ ಸಾರ್ವಜನಿಕರು ತಮ್ಮ ಸಲಹೆ, ಅನಿಸಿಕೆಗಳನ್ನು ಟೀಕೆ ಟಿಪ್ಪಣಿಗಳನ್ನು ಹಾಗೂ ಅಹವಾಲುಗಳನ್ನು ನೇರವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ/ಜಿಲ್ಲಾಧಿಕಾರಿಗಳು ಕೊಪ್ಪಳ ಜಿಲ್ಲೆ, ಕೊಪ್ಪಳ ಇವರಿಗೆ ಸಲ್ಲಿಸುವಂತೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿತ್ತು.

ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಯೋಜನಾ ಸ್ಥಳದಲ್ಲಿ ದಿನಾಂಕ: 19-03-2021 ರಂದು ಬೆಳಿಗ್ಗೆ 11:00 ಘಂಟೆಗೆ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ, ಇವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

**ಶ್ರೀ ಕೆ. ರಾಜು,** ಪರಿಸರ ಅಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಕೊಪ್ಪಳ ಹಾಗೂ ಹಿರಿಯ ಪರಿಸರ ಅಧಿಕಾರಿಗಳು (ಹೆಚ್ಚುವರಿ ಪ್ರಭಾರ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ವಲಯ ಕಛೇರಿ, ಬಳ್ಳಾರಿ ಇವರು **ಶ್ರೀ ವಿಕಾಸ್ ಕಿಶೋರ್ ಸುರಳ್ಕರ್** ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಕೊಪ್ಪಳ ಜಿಲ್ಲೆ ರವರಿಗೆ ಮತ್ತು ಕೊಪ್ಪಳ ತಹಶೀಹಲ್ದಾರ ರವರಿಗೂ ಸಹ ಹೃತ್ಪೂರ್ವಕವಾಗಿ ಸ್ವಾಗತವನ್ನು ಕೋರಿದರು ಹಾಗೂ ಈ ಸಭೆಗೆ ಆಗಮಿಸಿದಂತಹ ಎಲ್ಲಾ ಇಲಾಖೆಯ ಅಧಿಕಾರಿಗಳನ್ನು, ಯೋಜನೆಯ ಸಿಬ್ಬಂದಿಗಳನ್ನು, ಸುತ್ತಮುತ್ತಲಿನ ಹಳ್ಳಿಯ ಸಾರ್ವಜನಿಕರನ್ನು, ಮಾಧ್ಯಮ ಪ್ರತಿನಿಧಿಗಳನ್ನು ಮತ್ತು ಪರಿಸರ ಪ್ರೇಮಿಗಳನ್ನು ಹೃತ್ಪೂರ್ವಕವಾಗಿ ಸ್ವಾಗತಿಸಿದರು. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಉದ್ದೇಶವನ್ನು ಸಭೆಗೆ ತಿಳಿಸಿ, ಯೋಜನೆಯ ಕಾರ್ಯಕಾರಿ ಸಾರಾಂಶವನ್ನು ಸಾರ್ವಜನಿಕ ಪರಾಮರ್ಶೆಗೆ ಸಂಬಂಧಪಟ್ಟ ಕಛೇರಿಗಳಲ್ಲಿ (ಎಂಟು ಕಛೇರಿಗಳು) ಇಡಲಾಗಿತ್ತು ಎಂದು ತಿಳಿಸಿದರು. ಸಭೆಯನ್ನು ಮಾನ್ಯ ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ ಇವರಿಗೆ ತಮ್ಮ ಅಧ್ಯಕ್ಷತೆಯಲ್ಲಿ ನಡೆಸಿಕೊಡಲು ವಿನಂತಿಸಿಕೊಂಡರು. ಸದರಿ ಯೋಜನೆಯ ಕಾರ್ಯಚಟುವಟಿಕೆಗಳ ಬಗ್ಗೆ ಮತ್ತು ಅಳವಡಿಸಬಹುದಾದಂತಹ ಮಾಲಿನ್ಯ ನಿಯಂತ್ರಣ ಕ್ರಮಗಳ ಬಗ್ಗೆ ವಿವರವಾದ ವರದಿಯನ್ನು ಸಾರ್ವಜನಿಕರಿಗೆ ತಿಳಿಸುವಂತೆ ಯೋಜನೆಯ ಪ್ರತಿನಿಧಿಗಳಿಗೆ ಸೂಚಿಸಿದರು.

ಸದರಿ ಯೋಜನೆಯ ಪ್ರತಿನಿಧಿಗಳು ಮತ್ತು ಯೋಜನೆಯ ಸಲಹೆಗಾರರಾದ ಮೆ: ಕೆ.ಆರ್.ಎಸ್ ಎಂಟರ್ ಪ್ರೈಸಸ್ ಇವರು ಸದರಿ ಯೋಜನೆಯ ಹಾಗೂ ಕಾರ್ಯ ಚಟುವಟಿಕೆಗಳ ಬಗ್ಗೆ ವಿವರಗಳನ್ನು ಶಕ್ತಿ ಬಿಂದು ಪ್ರದರ್ಶನದಲ್ಲಿ ಸಭೆಗೆ ತಿಳಿಸಿದರು. ಸದರಿ ವಿವರಗಳನ್ನು **ಅನುಬಂಧ–5** ರಲ್ಲಿ ಲಗತ್ತಿಸಲಾಗಿದೆ.

ಸಾರ್ವಜನಿಕರು ವ್ಯಕ್ತ ಪಡಿಸಿದ ಅನಿಸಿಕೆಗಳು ಈ ಕೆಳಗಿನಂತಿವೆ.

**1) ಫಕೀರಸಾಬ ನದಾಫ್, ರಾಜೂರು**

ಸಭೆಯ ಗಣ್ಯ ಮಾನ್ಯರಿಗೆಲ್ಲರಿಗೂ ಹಾಗೂ ಸಭೆಯಲ್ಲಿ ಭಾಗಿಯಾದಂತಹ ಸಾರ್ವಜನಿಕರಿಗೂ ನನ್ನ ನಮಸ್ಕಾರಗಳು, ಈ ಗ್ರ್ಯಾನೈಟ್ ಗಣಿಗಾರಿಕೆಯಿಂದ ಸರ್ಕಾರಕ್ಕೆ ಯಾವ ರೀತಿಯಾದಂತಹ ಆದಾಯವಿದೆ, ಈ ಚಟುವಟಿಕೆಯಿಂದ ಆಗುವಂತಹ ಲಾಭಗಳೇನು ಎಂಬುದರ ಬಗ್ಗೆ ತಿಳಿಸಿದರು. ಈ ವಿಷಯಕ್ಕೆ ಸಂಬಂಧಿಸಿದಂತೆ ಉದ್ದಿಮೆಯ ಪರವಾಗಿ ಡಾ// ಎಸ್ ಕೆ ಮ್ಯಾಗೇರಿ (ಕನ್ಸಲ್ಟಿಂಗ್ ಮೈನಿಂಗ್ ಜಿಯೋಲಾಜಿಸ್ಟ ಇವರು ಈ ಗ್ರ್ಯಾನೈಟ್ ಗಣಿಗಾರಿಕೆಯಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ರೂ. ೧.೭೫ ಲಕ್ಷ ಹಣವನ್ನು ವಿನಿಯೋಗಿಸುವುದಲ್ಲದೇ ಸರ್ಕಾರಕ್ಕೆ ತೆರಿಗೆ ಭರಿಸಲಾಗುವುದು ಎಂದು ತಿಳಿಸಿದರು.

**2) ಬಿ. ವಿಜಯಾರೆಡ್ಡಿ, NGO, Bellary**

ಪರಿಸರ ಸಾರ್ವಜನಿಕ ಸಭೆಯಲ್ಲಿ ಭಾಗಿಯಾದಂತಹ ಎಲ್ಲರಿಗೂ ನನ್ನ ನಮಸ್ಕಾರಗಳು, ಸಭೆಯ ಅಧ್ಯಕ್ಷತೆ ವಹಿಸಿದ ಮಾನ್ಯ ಜಿಲ್ಲಾಧಿಕಾರಿಗಳಿಗೂ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿಗಳಿಗೂ ನನ್ನ ನಮಸ್ಕಾರಗಳು. ಈ ಗ್ರ್ಯಾನೈಟ್ ಉದ್ದಿಮೆಯ ಕಾರ್ಯಚಟುವಟಿಕೆಯಿಂದ ಹೊರಡುವ ಧೂಳನ್ನು ನಿಯಂತ್ರಿಸಲು ಸ್ಪ್ರಿಂಕ್ಲರ್ ಗಳನ್ನು ಅಳವಡಿಸುವುದು, ರಸ್ತೆಗಳ ಡಾಂಬರಿಕರಣ ಮಾಡುವುದರ ಕುರಿತು ಕ್ರಮ ವಹಿಸುವುದು. ಕೆಲಸ ಮಾಡುವ ಕೆಲಸಗಾರರಿಗೆ ಅತ್ಯವಶ್ಯಕವಾಗಿ ಕಾರ್ಮಿಕರ ಆರೋಗ್ಯ ಹಿತದೃಷ್ಟಿಯಿಂದ ಮುಖಗವಚವನ್ನು ನೀಡುವಂತೆ ಕ್ರಮವಹಿಸಬೇಕು, ಹೆಚ್ಚು ಹೆಚ್ಚು ಗಿಡಗಳನ್ನು ರಸ್ತೆಯ ಅಕ್ಕಪಕ್ಕದಲ್ಲಿ ಬೆಳೆಸುವ ಮುಖಾಂತರ ಪರಿಸರ ಸಂರಕ್ಷಿಸುವ ಜೊತೆಗೆ ಪಕ್ಕದ ಗ್ರಾಮ ಹಾಗೂ ಹಳ್ಳಿಗಳಲ್ಲಿ ವಾಸಿಸುವಂತಹ ಜನರ ಆರೋಗ್ಯ ರಕ್ಷಿಸುವ ಜವಾಬ್ದಾರಿ ತಮ್ಮ ಮೇಲಿರುತ್ತದೆ, ಬಹಳ ಜನ ವಿದ್ಯಾವಂತರಿದ್ದಾರೆ ಅವರಿಗೆ ಸದರಿ ಯೋಜನೆಯಲ್ಲಿ ಉದ್ಯೋಗ ಅವಕಾಶ ಕಲ್ಪಿಸಬೇಕು ಹಾಗೂ ಸ್ಥಳೀಯರಿಗೆ ಮಾತ್ರ ಈ ಯೋಜನೆಯಲ್ಲಿ ಉದ್ಯೋಗ ನೀಡಬೇಕು.

ಸ್ಥಳೀಯ ಗ್ರಾಮದ ಯುವಕರಿಗೆ ಉದ್ಯೋಗದಲ್ಲಿ ಹೆಚ್ಚು ಆದ್ಯತೆ ಕೊಡಬೇಕು ಮತ್ತು ಸುತ್ತಮುತ್ತಲಿನ ಗ್ರಾಮಗಳ ಕೃಷಿ ಜಮೀನುಗಳಿಗೆ ತೊಂದರೆಯಾಗದ ರೀತಿಯಲ್ಲಿ ಯೋಜನೆ ನಡೆಸಬೇಕೆಂದು ಕೊರುತ್ತೇನೆ. ಕೊನೆಯದಾಗಿ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಗುಣವಾಗಿ ಉದ್ಯೋಗ ನೀಡಿ ಹಾಗೂ ಪಕ್ಕದಲ್ಲಿರುವಂತಹ ಕೃಷಿ ಜಮೀನುಗಳಿಗೆ ತಾವು ಹಾಕುತ್ತಿರುವಂತಹ ಯೋಜನೆಯಿಂದ ಮತ್ತು ಯೋಜನೆದಾರರಿಂದ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಈ ಗಣಿಗಾರಿಕೆಯ ಚಟುವಟಿಕೆಯ ಯೋಜನೆಯನ್ನು ಬೆಂಬಲಿಸುವುದಾಗಿ ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡುತ್ತೇನೆ ಎಂದು ಹೇಳಿ ನನ್ನ ಮಾತನ್ನು ಮುಗಿಸುತ್ತೇನೆ ಎಂದು ತಿಳಿಸಿದರು.

**3) ಮಂಜುನಾತ್ ಕಲ್ಲೂರು**

ನಮ್ಮ ಊರಿನಲ್ಲಿ ಉದ್ಯೋಗದ ಅವಶ್ಯಕತೆಯಿದೆ ಕಲ್ಲೂರಿನ ಸ್ಥಳೀಯರಿಗೆ ಉದ್ಯೋಗದ ಅವಕಾಶ ನೀಡಿ ಅನುಕೂಲ ಮಾಡಿಕೊಡಬೇಕಾಗಿ ಕೋರುತ್ತೇನೆ ಎಂದು ಮನವಿ ಮಾಡಿದರು.

**4) ವರದಯ್ಯಜ್ಜ, ರಾಜೂರು**

ಕಲ್ಲೂರು ಗ್ರಾಮದ ನಿವಾಸಿಯಾದ ನಾನು ತಮ್ಮಲ್ಲಿ ಕೇಳಿಕೊಳ್ಳುವುದೇನೆಂದರೆ, ನಮ್ಮ ಊರಿನಲ್ಲಿ ಉದ್ಯೋಗದ ಅವಶ್ಯಕತೆಯಿದೆ ಕಲ್ಲೂರಿನ ಸ್ಥಳೀಯರಿಗೆ ಉದ್ಯೋಗದ ಅವಕಾಶ ನೀಡಿ ಅನುಕೂಲ ಮಾಡಿಕೊಡಬೇಕಾಗಿ ಕೋರುತ್ತೇನೆ ಎಂದು ಮನವಿ ಮಾಡಿದರು. ಶಾಲಾ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡಬೇಕು ಹಾಗೂ ಸೌಲಭ್ಯಗಳನ್ನು ನೀಡಬೇಕು ಅಂತ ಹೇಳಿ ನನ್ನ ಮಾತ ಮುಗಿಸುತ್ತೇನೆ.

**5) ವಿ. ಸುನಂದರೆಡ್ಡಿ**

ಪರಿಸರ ಸಾರ್ವಜನಿಕ ಆಲಿಕೆ ಸಭೆಯಲ್ಲಿ ಭಾಗವಹಿಸಿದ ಗಣ್ಯಮಾನ್ಯರಿಗೆ ನಮಸ್ಕರಿಸುತ್ತಾ ಹಾಗೂ ಸಭೆಯಲ್ಲಿ ಹಾಜರಿದ್ದಂತಹ ಎಲ್ಲಾ ಸಾರ್ವಜನಿಕರಿಗೂ ನನ್ನ ನಮಸ್ಕಾರಗಳು, ಈ ಗಣಿಗಾರಿಕೆಯ ಉದ್ದಿಮೆದಾರರಿಗೆ ಅಭಿನಂದನೆಗಳು, ಈ ಗ್ರ್ಯಾನೈಟ್ ಕ್ವಾರಿ ಸ್ಥಾಪಿಸುತ್ತಿರುವ ತಮ್ಮಲ್ಲಿ ನನ್ನ ಸಲಹೆಗಳು ಇಷ್ಟೆ ಆರೋಗ್ಯಯುತವಾಗಿ ಜೀವನ ನಡೆಸಲು ಒಳ್ಳೆಯ ನೀರಿನ ವ್ಯವಸ್ಥೆ ಕಲ್ಪಿಸಿ, ಶೇಕಡಾ 40 ರಿಂದ ಶೇಕಡಾ 50 ರಷ್ಟು ಮರಗಳನ್ನು ಬೆಳೆಸಿ, ಪಕ್ಕದ ಗ್ರಾಮಗಳಲ್ಲಿ ಮರಗಳನ್ನು ಬೆಳೆಸಲು ಸಹಾಯಹಸ್ತ ನೀಡಿ, ಗ್ರಾಮದ ರಸ್ತೆಗಳ ಸಬಲೀಕರಣ ಗೊಳಿಸಿ, ಅಕ್ಕಪಕ್ಕದ ಗ್ರಾಮದಲ್ಲಿರುವ ನಿರುದ್ಯೋಗಿ ಯುವಕ ಯುವತಿಯರಿಗೆ ಉದ್ಯೋಗ ಕಲ್ಪಿಸುವ ಕಾರ್ಯಗಳನ್ನು ಕೈಗೆತ್ತಿಕೊಳ್ಳಿ ಮತ್ತು ಸಿ.ಎಸ್.ಆರ್ ಬಜೆಟ್ ಪ್ರಕಾರವಾಗಿ ಸಂಬಂಧಪಟ್ಟ ಗ್ರಾಮಗಳ ಅಭಿವೃದ್ಧಿ ಪಡಿಸಿ ಹಾಗೂ ಸ್ಥಳೀಯ ನಿರುದ್ಯೋಗ ಯುವಕರಿಗೆ ಹೆಚ್ಚಿನ ತರಬೇತಿ ನೀಡಿ ಅವರನ್ನು ಈ ಯೋಜನೆಯಲ್ಲಿ ಬಳಸಿಕೊಳ್ಳಬೇಕಾಗಿ ಕೋರುತ್ತೇನೆಂದು ತಿಳಿಸಿದರು. ಮುಂದುವರೆದು ಮಾಲಿನ್ಯ ನಿಯಂತ್ರಣ ಕ್ರಮಗಳನ್ನು ಪರಿಸರ ಆಘಾತ ಅದ್ಯಯನದ ವರಧಿಯ ಪ್ರಕಾರ ಅಳವಡಿಸಿಕೊಳ್ಳಬೇಕೆಂದು ಕೋರುತ್ತೇನೆ ಎಂದು ಹೇಳಿ ನನಗೆ ಇಷ್ಟು ಹೊತ್ತು ಮಾತನಾಡಲು ಅನುವು ಮಾಡಿ ಕೊಟ್ಟಂತಹ ಮಾನ್ಯರಿಗೆ ಧನ್ಯವಾದಗಳು.

**ಶ್ರೀ. ವಿಕಾಸ್ ಕಿಶೋರ್ ಸುರಳ್ಕರ್, ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು** ಇವರು ಸಾರ್ವಜನಿಕರ ಅಭಿಪ್ರಾಯಗಳನ್ನು ಕ್ರೋಢಿಕರಿಸಿ ನಡುವಳಿಗಳನ್ನು ಮಂಡಳಿಯ ಮೂಲಕ ಸರ್ಕಾರಕ್ಕೆ ಸಲ್ಲಿಸುವುದಾಗಿ ತಿಳಿಸಿದರು.

ಈ ಗಣಿಗಾರಿಕೆಯ ಅಂತಿಮ ಅವಧಿಯಲ್ಲಿ ಮೈನಿಂಗ್ ಕ್ಲೋಸರ್ ಪ್ಲ್ಯಾನ್ ಪ್ರಕಾರ ಗಣಿಗಾರಿಕೆ ಉದ್ದಿಮೆಯವರು ಎಲ್ಲಾ ಕ್ರಮಗಳನ್ನು ಕೈಗೊಳ್ಳಬೇಕಾಗಿ ತಿಳಿಸಿದರು ಹಾಗೂ ಗಣಿಗಾರಿಕೆಯ ಅವಧಿಯಲ್ಲಿ ಯಾವುದೇ ಅಪಘಾತಗಳು ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವಂತೆ ಗಣಿಗಾರಿಕೆಯ ಉದ್ದಿಮೆದಾರರಿಗೆ ತಿಳಿಸಿದರು ಹಾಗೂ ಈ ಪರಿಸರ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಸಾರ್ವಜನಿಕರಿಗೂ ಧನ್ಯವಾದಗಳನ್ನು ತಿಳಿಸಿ ಈ ಯೋಜನೆಯ ವಿಷಯವಾಗಿ ಈಗಾಗಲೇ ಹಿರಿಯ ಪರಿಸರ ಅಧಿಕಾರಿಗಳು (ಹೆಚ್ಚುವರಿ ಪ್ರಭಾರ) ಹಾಗೂ ಪರಿಸರ ಅಧಿಕಾರಿಗಳು ತಿಳಿಸಿರುವಂತೆ ಯೋಜನೆಯ ಬಗ್ಗೆ ಸಾರ್ವಜನಿಕರು ಸಲ್ಲಿಸಿರುವ ಅಹವಾಲುಗಳನ್ನು ಹಾಗೂ ಮೌಖಿಕವಾಗಿ ಸಲ್ಲಿಸಿರುವ ಎಲ್ಲಾ ವಿವರಣೆಗಳನ್ನು ಸಂಗ್ರಹಿಸಿ ನಡುವಳಿಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವುದಾಗಿ ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸುವುದಾಗಿ ತಿಳಿಸಿದರು.

ವಂದನಾರ್ಪಣೆಯೊಂದಿಗೆ ಈ ಸಭೆಯು ಮುಕ್ತಾಯಗೊಂಡಿತು.

(ಶ್ರೀ. ವಿಕಾಸ್ ಕಿಶೋರ್ ಸುರಳ್ಕರ್ ಭಾ.ಆ.ಸೇ.)
**ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು ಮತ್ತು ಪರಿಸರ ಸಾರ್ವಜನಿಕ ಆಲಿಕೆ ಸಭೆ ಅಧ್ಯಕ್ಷರು ಕೊಪ್ಪಳ,**